ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಪರಿಸರ ಸೂಕ್ಷ್ಮ ವಲಯದ ಅಧಿಸೂಚನೆಯ ಕುರಿತು

ಶ್ರೀ ಎಸ್. ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ) -

17 (29) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿರುವ ರಾಷ್ಟ್ರೀಯ ಉದ್ಯಾನವನ (National Park) ಮತ್ತು ವನ್ಯ ಜೀವಿ ಅಭಯಾರಣ್ಯಗಳ (Wildlife sanctuaries) ಸಂಖ್ಯೆ ಎಷ್ಟು; ಅವುಗಳ ವಿಸ್ತೀರ್ಣವೆಷ್ಟು; (ವೃತ್ತವಾರು ಮತ್ತು ವಿಭಾಗವಾರು ಮಾಹಿತಿಯನ್ನು ನೀಡುವುದು)

(ಆ) ಕುದುರೆಮುಖ ರಾಷ್ಟ್ರೀಯ ಉದ್ಯಾನವನ, ಸೋಮೇಶ್ವರ ವನ್ಯ ಜೀವಿ ಅಭಯಾರಣ್ಯ ಮೂಕಾಂಬಿಕಾ ವನ್ಯ ಜೀವಿ ಅಭಯಾರಣ್ಯ ಪ್ರದೇಶದಲ್ಲಿ ಪರಿಸರ ಸೂಕ್ಷ್ಮ ವಲಯದ (eco sensitive zone) ಅಧಿಸೂಚನೆಯನ್ನು ಹೊರಡಿಸಲಾಗಿದೆಯೇ; ಹಾಗಿದ್ದಲ್ಲಿ, ಅಧಿಸೂಚನೆಯ ಪ್ರತಿಯನ್ನು ಒದಗಿಸುವುದು)

(ಇ) ಈ ಮೂರು ಪ್ರದೇಶಗಳಲ್ಲಿ (zone Master plan)ನ್ನು ತಯಾರಿಸಲಾಗಿದೆಯೇ; ಹಾಗಿದ್ದಲ್ಲಿ, ಯೋಜನೆಗೆ ಮಾನಿಟರಿಂಗ್ ಸಮಿತಿಯಿಂದ ಅನುಮೋದನೆ ಪಡೆಯಲಾಗಿದೆಯೇ; (ಪ್ರತಿಯನ್ನು ಒದಗಿಸುವುದು)

(ಈ) ಈ ಅಧಿಸೂಚನೆಯ ವ್ಯಾಪ್ತಿಗೆ ಒಳಪಡುವ ಗ್ರಾಮಗಳು ಯಾವುವು; (ಜಿಲ್ಲಾವಾರು, ತಾಲ್ಲೂಕುವಾರು, ಗ್ರಾಮವಾರು ಪಟ್ಟಿಯನ್ನು ಒದಗಿಸುವುದು) ಅವುಗಳಲ್ಲಿ ಅನುಮತಿಸಲಾದ ಮತ್ತು ನಿರ್ಭಂದಿಸಲಾದ ಚಟುವಟಿಕೆಗಳು ಯಾವುವು? (ಪಟ್ಟಿಯನ್ನು ಒದಗಿಸುವುದು)